

ಕೊಲಂಬಿಯಾ ವಿವಿ ಕ್ಯಾಂಪಸ್

ಹಾಗೂ ಬಾಹ್ಯಾಕಾಶ ಕ್ಷೇತ್ರದಲ್ಲಿ ಸಂಶೋಧನೆ ನಡೆಸಲು ಭಾರತೀಯರು ಹೆಚ್ಚು ಹಾತೊರೆಯುತ್ತಾರೆ.

'ಮಾಹಿತಿ ತಂತ್ರಜ್ಞಾನ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಅಮೆರಿಕದ ವಿಶ್ವವಿದ್ಯಾಲಯಗಳು ಮತ್ತು ಬಹುರಾಷ್ಟ್ರೀಯ ಕಂಪೆನಿಗಳು ಭಾರತೀಯ ಪ್ರತಿಭೆಗಳನ್ನು ಬಹುವಾಗಿ ನೆಚ್ಚಿಕೊಂಡಿವೆ' ಎಂದು ಒಳನೋಟ ಬೀರುತ್ತಾರೆ ರಾಹುಲ್.

'ಡೊನಾಲ್ಡ್ ಟ್ರಂಪ್ ಅವರ ನಡೆಗಳು ದೊಡ್ಡ ಪ್ರಶ್ನಾರ್ಥಕ ಚಿಹ್ನೆಯನ್ನು ಸೃಷ್ಟಿಸಿದ್ದು ನಿಜ. ಶೈಕ್ಷಣಿಕ ಸಂಬಂಧಗಳ ಮಧ್ಯೆ ಗೋಡೆ ಕಟ್ಟುವ ಕೆಲಸಕ್ಕೆ ಆಸ್ಪದ ಸಿಗದೆ, ಸೇತುವೆ ನಿರ್ಮಾಣದ ಕಾರ್ಯಕ್ಕೆ ಉತ್ತೇಜನ ದೊರೆಯಬೇಕಿದೆ. ಪಾಲಕರಿಗೆ ಮಕ್ಕಳ ಸುರಕ್ಷತೆ ಎಲ್ಲಕ್ಕಿಂತ ದೊಡ್ಡದು. ಹೊಸ ಸರ್ಕಾರ ಮಾಡಬೇಕಾದ ಮೊದಲ ಕೆಲಸವೆಂದರೆ ಆ ಸುರಕ್ಷತೆಯನ್ನು ಖಚಿತಪಡಿಸುವುದು' ಎಂದು ಅವರು ಸೂಚ್ಯವಾಗಿ ಹೇಳುತ್ತಾರೆ.

ಅಮೆರಿಕದ ರಾಜತಾಂತ್ರಿಕರಲ್ಲೂ ಈ ಬಗ್ಗೆ ಗೊಂದಲವಿದೆ. ಕೆಲವರು ಇನ್ನೂ ಆಶಾವಾದವನ್ನು ಬಿಟ್ಟಿಲ್ಲ. 'ಅಂತರರಾಷ್ಟ್ರೀಯ ವಿದ್ಯಾರ್ಥಿಗಳನ್ನು ಬರಮಾಡಿಕೊಳ್ಳುವ ವಿಷಯದಲ್ಲಿ ಅಮೆರಿಕದ ನೀತಿಯಲ್ಲಿ ಮುಂದೆಯೂ ಬದಲಾವಣೆ ಇರದು ಎಂದೆನಿಸುತ್ತದೆ. ಇದುವರೆಗೆ ಬರುತ್ತಿದ್ದ ರೀತಿಯಲ್ಲೇ ಇನ್ನು ಮುಂದೆಯೂ ಶಿಕ್ಷಣಾರ್ಥಿಗಳು ಈ ದೇಶಕ್ಕೆ ಬರಬಹುದು. ಶೈಕ್ಷಣಿಕ ವಿನಿಮಯ ಕಾರ್ಯಕ್ರಮ ಸಹ ಈ ಹಿಂದಿನಂತೆಯೇ ನಡೆಯಲಿದೆ' ಎಂದು ಅಮೆರಿಕದ ಇನ್‌ಸ್ಟಿಟ್ಯೂಷನ್ ಫಾರ್ ಇಂಟರ್‌ನ್ಯಾಷನಲ್ ಎಜುಕೇಷನ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅಲೆನ್ ಗುಡ್‌ಮ್ಯಾನ್ ಅಭಿಪ್ರಾಯ ಪಡುತ್ತಾರೆ. ಆದರೆ ಪರಿಸ್ಥಿತಿ ಅವರು ಹೇಳಿದಷ್ಟು ಸರಳವಾಗಿಲ್ಲ ಎನ್ನುವುದು ಗೋಡೆಯ ಮೇಲಿನ ಬರಹದಂತೆ ಎದ್ದು ಕಾಣಿಸುತ್ತಿದೆ.

ಅಮೆರಿಕಕ್ಕೆ ಹಾರಬಯಸುವ ಭಾರತೀಯ ವಿದ್ಯಾರ್ಥಿಗಳು ಈಗ 'ಜುಗಾರಿ ಕ್ರಾಸ್'ನಲ್ಲಿ ನಿಂತಿದ್ದಾರೆ. ಟ್ರಂಪ್ ಅಧಿಪತ್ಯದ ಅಮೆರಿಕ, ರತ್ನಗಂಬಳಿ ಹಾಸಿ ಕಾದಿರುವ ಕೆನಡಾ, ಪಕ್ಕದಲ್ಲೇ ಇರುವ ಸಿಂಗಾಪುರ, ದೂರದ ಆಸ್ಟ್ರೇಲಿಯಾ ಎಲ್ಲ ಕಡೆಯ ವಿಮಾನಗಳೂ ಆತನಿಗಾಗಿ ಕಾದು ನಿಂತಿವೆ! ಇನ್ನೆರಡು ತಿಂಗಳು ನಮ್ಮ ವಿದ್ಯಾರ್ಥಿಗಳ ಭವಿಷ್ಯದ ಬಹುಕ್ಲಿಷ್ಟಕರ ತಿಂಗಳುಗಳು ಎನ್ನುವುದರಲ್ಲಿ ಎರಡು ಮಾತಿಲ್ಲ. ■



ಶ್ರೀ ಪಂಚಮುಖಿ ಜ್ಯೋತಿಷ್ಯಂ

INDIA'S MOST POPULAR ASTROLOGER
ಪಂಡಿತ. ಶ್ರೀ ಗಣೇಶ್ ಕುಮಾರ್ ಶ್ರೀ ಶ್ರೀ ಹನುಮಾನ್ ಆರಾಧಕರು
ಕೇರಳ, ಕಲ್ಕತ್ತಾದ ಸಾವಿರಾರು ವರ್ಷಗಳ ಹಿಂದಿನ ಪ್ರಾಚೀನ ನಾಡಿಗ್ರಂಥ ಆಧಾರದಿಂದ ಸರ್ವಮಂತ್ರ ವಿದ್ಯೆ, ಜ್ಯೋತಿಷ್ಯ ಶಾಸ್ತ್ರ ಪಂಚಮಹಾಗುರುಗಳ ಬೋಧನೆಯಿಂದ ಯೋಗ ಯಜ್ಞಗಳ ಮೂಲಕ ಸರ್ವ ವಿದ್ಯೆಯನ್ನು ತಮ್ಮ ವಶದಲ್ಲಿರಿಸಿಕೊಂಡಿರುವವರು. ವಶೀಕರಣ, ಮದುವೆ, ಸಂತಾನ, ದಾಂಪತ್ಯ, ಪ್ರೇಮವಿಚಾರ, ಲೈಂಗಿಕ, ಮಾನಸಿಕ, ಗೃಹಶಾಂತಿ, ವಿದ್ಯೆ, ಆರೋಗ್ಯ, ವಿದೇಶ ಪ್ರಯಾಣ, ಹಣಕಾಸು, ವ್ಯಾಪಾರ,ಉದ್ಯೋಗ, ಕೋರ್ಟ್ ಕೇಸು, ಸಾಲಬಾಧೆ, ಮಾಟಬಾಧೆ, ಶತ್ರುಕಾಟ, ಅಲ್ಲದೆ ರಾಜಯೋಗ ವಶ ಮತ್ತು ಅಖಂಡ ಯೋಗವಶಗಳು, ಇನ್ನಿತರ ನಿಮ್ಮ ಯಾವುದೇ ಕಠಿಣ, ನಿಗೂಢ ಮತ್ತು ಗುಪ್ತ ಸಮಸ್ಯೆಗಳಿಗೆ, ಸಲಹೆ ಮತ್ತು ಪರಿಹಾರ ಶತಸಿದ್ಧ.
600 ವರ್ಷ ಹಳೆಯ ಪಂಚಸಿದ್ಧಿ ತಂತ್ರಗಳಿಂದ ನಿಮ್ಮ ದುಶ್ಚಟ, ದೀರ್ಘಾವಧಿ, ಲೈಂಗಿಕ, ಸಂತಾನ, ಸಮಸ್ಯೆಗಳಿಗೆ ಸನಾತನ ಪ್ರಕ್ರಿಯೆಗಳಿಂದ ಅತೀ ಶೀಘ್ರದಲ್ಲಿ ಸಮಗ್ರ ಪರಿಹಾರ ಕಲ್ಪಿಸುತ್ತಿರುವವರು.
ವಿ.ಸೂ.: ಇಲ್ಲಿ ಹೇಳುವ ವಿಷಯಗಳೆಲ್ಲವೂ ಗುಪ್ತವಾಗಿರುವುದರಿಂದ ನಿಮ್ಮ ಯಾವುದೇ ಸಮಸ್ಯೆಗಳನ್ನು ಹೇಳಲು ಹಿಂಜರಿಯಬೇಕಾಗಿಲ್ಲ. ದೂರವಾಣಿ ಹಾಗೂ ಪತ್ರದ ಮೂಲಕ ವಿವರಗಳನ್ನು ಪಡೆಯಬಹುದು.
ಬೆಂಗಳೂರು ಖಾಯಂ ಮನೆ ವಿಳಾಸ ನಂ.167/3, ಮೊದಲನೇ ಮಹಡಿ, 1ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಮುತ್ತುರಾಯಸ್ವಾಮಿ ದೇವಸ್ಥಾನದ ಹತ್ತಿರ, ಮೈಸೂರು ಸರ್ಕಲ್, (ಸಿರಸಿ ವೃತ್ತ), ಚಾಮರಾಜಪೇಟೆ, ಬೆಂಗಳೂರು–18.
ಮೈಸೂರಿನಲ್ಲಿಯೂ ಲಭ್ಯವಿರುತ್ತಾರೆ
ಸಮಸ್ಯೆ ಏನೇ ಇರಲಿ, ಎಷ್ಟೇ ಕಠಿಣವಾಗಿರಲಿ 600 ವರ್ಷಗಳ ಹಳೆಯ 108 ಜ್ಯೋತಿಷ್ಯ ತಂತ್ರಗಳಿಂದ ಮಹೋನ್ನತ ಪರಿಹಾರಗಳು.
ಬೆಂಗಳೂರು ಮೈಸೂರು 9880444450